ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/ 04 /ಎಸ್‌ಸಿಹೆಚ್(1)/2017–18

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು–560 001,
ದಿನಾಂಕ:30–11–2017.

## –:: ಸುತ್ತೋಲೆ ::–

**ವಿಷಯ:** ಪದವಿ ಹಾಗೂ ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳು NHFDC ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವ ಬಗ್ಗೆ.

**ಉಲ್ಲೇಖ:** Assistant Manager (Proj), National Handicapped Finance and Development Corporation, New Delhi ಇವರ ಪತ್ರ ಸಂ. NHF/2/22/SCH/TF/ADVT/2016/20692, Dated:18-09-2017

–000000–

ಉಲ್ಲೇಖದಲ್ಲಿನ ಪತ್ರದಲ್ಲಿ ತಿಳಿಸಿರುವಂತೆ, ರಾಜ್ಯದ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪದವಿ ಹಾಗೂ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳಿಗೆ NHFDC (National Handicapped Finance and Development Corporation) ಇವರು ಹೊಸದಾಗಿ ವಿಕಲಚೇತನರಿಗೋಸ್ಕರ ಹೊಸ ಯೋಜನೆಯನ್ನು ರೂಪಗೊಳಿಸಿ 2500 ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಪಡೆಯಲು ಅರ್ಜಿಯನ್ನು ಆಹ್ವಾನಿಸಿರುತ್ತಾರೆ.

ಪ್ರಯುಕ್ತ, ರಾಜ್ಯದಲ್ಲಿನ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಬಿ.ಇ ಹಾಗೂ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳು National Handicapped Finance and Development Corporation, New Delhi ಇವರ ವೆಬ್‌ಸೈಟ್ ವಿಳಾಸ www.nhfdc.nic.in ನಲ್ಲಿರುವ ಅನುಬಂಧದಲ್ಲಿ ವಿದ್ಯಾರ್ಥಿಯ ಮಾಹಿತಿಯನ್ನು ಕ್ರೋಢೀಕರಿಸಿ 01ನೇ ಜುಲೈ 2017 ರಿಂದ 30ನೇ ಜೂನ್ 2018ರ ಒಳಗೆ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದು ಹಾಗೂ ಹಾರ್ಡ್‌ಕಾಪಿಯನ್ನು ಪ್ರಾಂಶುಪಾಲರು ದೃಢೀಕರಿಸಿ ಮೇಲ್ಕಂಡ ವಿಳಾಸಕ್ಕೆ ಸಲ್ಲಿಸಲು ಸಹ ಸೂಚಿಸಲಾಗಿದೆ. ಈ ವಿದ್ಯಾರ್ಥಿವೇತನದ ಕುರಿತು ಅಭ್ಯರ್ಥಿಗಳು ಸದುಪಯೋಗಪಡಿಸಿಕೊಳ್ಳಲು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸುವುದು ಹಾಗೂ ತರಗತಿಗಳಲ್ಲಿ ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಲು ಈ ಮೂಲಕ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ www.nhfdc.nic.in ವೆಬ್‌ಸೈಟ್‌ನ್ನು ಸಂಪರ್ಕಿಸುವುದು.

ನಿರ್ದೇಶಕರು

ಇವರಿಗೆ,

*ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ* – *ಸೂಕ್ತ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.*

ಪ್ರತಿ ಮಾಹಿತಿಗಾಗಿ:–

1. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2. ಸಂಯೋಜನಾಧಿಕಾರಿಗಳು, ಇ–ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
3. ನಿರ್ದೇಶಕರ ಆಪ್ತಶಾಖೆಗೆ.
4. ಕಛೇರಿ ಪ್ರತಿ.